# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿಕ್ಕಮಗಳೂರು

## ಅಧಿಸೂಚನೆ ಸಂಖ್ಯೆ:13/2025, ದಿನಾಂಕ:22.04.2025

**ವಿಷಯ:** ಚಿಕ್ಕಮಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿಗೆ ಆಡಳಿತ ಸಹಾಯಕ ಹುದ್ದೆಗೆ ಹೊರಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ 06 ತಿಂಗಳ ಅವಧಿಗೆ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿರುವ ಕುರಿತು.

**ಉಲ್ಲೇಖ:** ಕರಾಕಾಸೇಪ್ರಾ ಪತ್ರ ಸಂಖ್ಯೆ: 113/ಎಡಿಎಂ/2012, ದಿ:13.09.2019.

******

**ಪ್ರಸ್ತಾವನೆ:**

ಗೌರವಾನ್ವಿತ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಕಾಸೇಪ್ರಾ:113/ಎಡಿಎಂ/2012, ದಿನಾಂಕ:13.09.2019. ನಿರ್ದೇಶದನ್ವಯ ಚಿಕ್ಕಮಗಳೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿಗೆ ತಾತ್ಕಾಲಿಕವಾಗಿ 06 ತಿಂಗಳ ಅವಧಿಗೆ ಸಂಪೂರ್ಣ ಹೊರಗುತ್ತಿಗೆ ಆಧಾರದ ಮೇಲೆ ಆಡಳಿತ ಸಹಾಯಕ ಹುದ್ದೆಯ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಮಾಸಿಕ ವೇತನ |
|---|---|---|---|
| 1 | ಆಡಳಿತ ಸಹಾಯಕ | 01 | ರೂ.18,340-00 |

**ವಿದ್ಯಾರ್ಹತೆ:**

1. ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದ ಯಾವುದಾದರೂ ಪದವಿ ಅಥವಾ ತತ್ಸಮಾನ ಪದವಿಯನ್ನು ಹೊಂದಿರಬೇಕು.
2. ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಕಿರಿಯ ಶ್ರೇಣಿ (ಜೂನಿಯರ್ ಟೈಪಿಂಗ್) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
3. ಕಂಪ್ಯೂಟರ್ ಜ್ಞಾನ ಹೊಂದಿರಬೇಕು.
4. ಕಂಪ್ಯೂಟರ್‌ನಲ್ಲಿ ಡೇಟಾವನ್ನು ಫೀಡ್ ಮಾಡಲು ಬರಬೇಕು.
5. ಕನ್ನಡ ಮತ್ತು ಇಂಗ್ಲೀಷ್‌ನಲ್ಲಿ ಡಿಕ್ಟೇಶನ್ ತೆಗೆದುಕೊಂಡು ಟೈಪ್ ಮಾಡುವ ಸಾಮರ್ಥ್ಯ ಹೊಂದಿರಬೇಕು
6. ಕಡತ (ಫೈಲ್) ನಿರ್ವಹಣೆ ಮತ್ತು ಸಂಸ್ಕರಣೆಯ ಜ್ಞಾನ ಹೊಂದಿರಬೇಕು.

- **ಅರ್ಜಿ ಸಲ್ಲಿಸುವ ವಿಧಾನ:**

ಅರ್ಹ ಅಭ್ಯರ್ಥಿಗಳು ಈ ಅಧಿಸೂಚನೆಯೊಂದಿಗೆ ನೀಡಿರುವ ನಮೂನೆಯಲ್ಲಿ ತಮ್ಮ ಸಂಪೂರ್ಣ ಮಾಹಿತಿಯನ್ನು ಸೂಕ್ತ ದಾಖಲೆಗಳೊಂದಿಗೆ ಹಾಗೂ ಪಾಸ್‌ಪೋರ್ಟ್ ಅಳತೆ 01 ಇತ್ತೀಚಿನ ಭಾವಚಿತ್ರಗಳೊಂದಿಗೆ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಲಯದ ಆವರಣ, ಚಿಕ್ಕಮಗಳೂರು ಇಲ್ಲಿಗೆ ಕೊನೆಯ ದಿನಾಂಕದೊಳಗಾಗಿ ಅಂದರೆ ದಿನಾಂಕ:07.05.2025 ರ ಸಂಜೆ

5.30ರೊಳಗಾಗಿ ಸಲ್ಲಿಸತಕ್ಕದ್ದು ಹಾಗೂ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

- **ನೇಮಕಾತಿ ವಿಧಾನ:**

  ಸಂದರ್ಶನ, ಕೌಶಲ್ಯ, ಕಂಪ್ಯೂಟರ್ ಮತ್ತು ಬೆರಳಚ್ಚು ನಿಖರತೆ ಮತ್ತು ನೈಪುಣ್ಯತೆ ಆಧರಿಸಿ ನೇರ ನೇಮಕಾತಿ.

**ಷರತ್ತುಗಳು:**

- ಸದರಿ ಹುದ್ದೆಗೆ ಅಭ್ಯರ್ಥಿಗಳನ್ನು ಸಂಪೂರ್ಣ ಹೊರಗುತ್ತಿಗೆ ಆಧಾರದ ಮೇಲೆ 06 ತಿಂಗಳ ಅವಧಿಗೆ ನೇಮಕ ಮಾಡಿಕೊಳ್ಳಲಾಗುವುದು.
- ಅಭ್ಯರ್ಥಿಗಳ 06 ತಿಂಗಳ ಅವಧಿ ಮುಗಿಯುವ ಪೂರ್ವದಲ್ಲಿ ಅವರ ಕಾರ್ಯವೈಖರಿ ಗಮನಿಸಿ ತೃಪ್ತಿಕರವಾಗಿದ್ದಲ್ಲಿ ಮತ್ತೊಂದು ಅವಧಿಗೆ ಪ್ರಾಧಿಕಾರವು ಇಚ್ಛಿಸಿದ್ದಲ್ಲಿ ಒಂದು/ಎರಡು ದಿನಗಳ ಬಿಡುವಿನಲ್ಲಿ ನಂತರ ನಿಯಮಾನುಸಾರ ಅಭ್ಯರ್ಥಿಗಳಿಂದ ಮನವಿಯನ್ನು ಪಡೆದು ಮರು ನೇಮಕ ಮಾಡಿಕೊಳ್ಳಲು ಅವಕಾಶವಿರುತ್ತದೆ.
- ಸದರಿ ಹುದ್ದೆಯು ಸಂಪೂರ್ಣ ತಾತ್ಕಾಲಿಕವಾಗಿದ್ದು, ನೇಮಕಗೊಂಡ ಅಭ್ಯರ್ಥಿಯು ಸದರಿ ಹುದ್ದೆಯಲ್ಲಿ ಅವರನ್ನು ಖಾಯಂಗೊಳಿಸುವ ಯಾವುದೇ ಹಕ್ಕನ್ನು ಪ್ರತಿಪಾದಿಸಲು ಅವಕಾಶವಿರುವುದಿಲ್ಲ.
- ಸದರಿ ಹುದ್ದೆಗೆ ನಿಗಧಿಗೊಳಿಸಿರುವ ಮಾಸಿಕ ಸಂಭಾವನೆಯು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ನಿರ್ದೇಶಿಸಲ್ಪಟ್ಟಿದ್ದು, ಈ ಕುರಿತು ಸರ್ಕಾರದಿಂದ ಅಥವಾ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಮುಂದೆ ಹೊರಡಿಸಬಹುದಾದ ಮಾರ್ಗಸೂಚಿಗಳಿಗೆ ಅನುಸಾರ ಬದಲಾವಣೆಗೆ ಒಳಪಡುವಂತಹ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
- ನೇಮಕಗೊಂಡ ಅಭ್ಯರ್ಥಿಯು ಅಗತ್ಯಬಿದ್ದರೆ ಸಾರ್ವತ್ರಿಕ ರಜಾ ದಿನಗಳಲ್ಲೂ ಸಹ ಕಛೇರಿ ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರತಕ್ಕದ್ದು.
- ನೇಮಕಗೊಂಡ ಅಭ್ಯರ್ಥಿಗಳು ತಮ್ಮ ಕರ್ತವ್ಯದಲ್ಲಿ ಸದಾ ಶಿಸ್ತುಬದ್ಧರಾಗಿರತಕ್ಕದ್ದು ಹಾಗೂ ಯಾವುದೇ ದುರ್ನಡತೆ, ಅಶಿಸ್ತು ತೋರಿದರೆ ಅಥವಾ ಹಣಕಾಸು ದುರುಪಯೋಗ ಮಾಡಿರುವುದು ಕಂಡುಬಂದಲ್ಲಿ ನಿಯಮಾನುಸಾರ ಶಿಕ್ಷೆಗೆ ಮತ್ತು ದಂಡನೆಗೆ ಗುರಿಪಡಿಸಲಾಗುವುದು.
- ಯಾವುದೇ ಕಾರಣಗಳಿಂದ ಅಭ್ಯರ್ಥಿಗಳು ತಮ್ಮ ಹುದ್ದೆಯನ್ನು ತ್ಯಜಿಸಲು ಇಚ್ಛಿಸಿದರೆ ಆ ಕುರಿತು ಒಂದು ತಿಂಗಳ ಮುಂಚಿತವಾಗಿ ಪ್ರಾಧಿಕಾರಕ್ಕೆ ಮಾಹಿತಿ ನೀಡತಕ್ಕದ್ದು.

- ನೇಮಕಗೊಂಡ ಅಭ್ಯರ್ಥಿಗಳು ಸರ್ಕಾರ ವಿಧಿಸಿರುವ ನೀತಿ ನಿಯಮಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಪಾಲಿಸತಕ್ಕದ್ದು.
- ಅರ್ಹ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಂಡ ನಂತರದಲ್ಲಿ ಪ್ರಾಧಿಕಾರದ ಕರ್ತವ್ಯ ನಿರ್ವಹಣೆಯಲ್ಲಿ ತೃಪ್ತಿಕರವಾಗಿರದ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳನ್ನು ಪ್ರಾಧಿಕಾರದಿಂದ ತೆಗೆದು ಹಾಕುವ ಸಂಪೂರ್ಣ ಅಧಿಕಾರ ಪ್ರಾಧಿಕಾರಕ್ಕೆ ಇರುತ್ತದೆ.

**ವಿಶೇಷ ಸೂಚನೆಃ**

- ಅರ್ಹ ಅಭ್ಯರ್ಥಿಗಳ ಸಂದರ್ಶನದ ಸಮಯ ಹಾಗೂ ಸ್ಥಳವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಕಟಣೆಯ ಮುಖಾಂತರ ತಿಳಿಸಲಾಗುವುದು.

ಗೌರವಾನ್ವಿತ ಅಧ್ಯಕ್ಷರು ಜಿ.ಕಾ.ಸೇ.ಪ್ರಾ. ಚಿಕ್ಕಮಗಳೂರು
ಇವರ ಆದೇಶದ ಮೇರೆಗೆ

ಸ್ಥಳಃ ಚಿಕ್ಕಮಗಳೂರು.
ದಿನಾಂಕಃ22.04.2025.

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಸದಸ್ಯಕಾರ್ಯದರ್ಶಿಗಳು,
ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,
ಚಿಕ್ಕಮಗಳೂರು.

ಃಅರ್ಜಿ ನಮೂನೆಃ

# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿಕ್ಕಮಗಳೂರು.

## ಆಡಳಿತ ಸಹಾಯಕ ಹುದ್ದೆಗಾಗಿ ಅರ್ಜಿ

ಇತ್ತಿಚಿನ ಭಾವಚಿತ್ರ

| | |
|---|---|
| 1. ಅರ್ಜಿದಾರರ ಹೆಸರುಃ | |
| 2. ತಂದೆ / ಗಂಡನ ಹೆಸರುಃ | |
| 3. ಖಾಯಂ ವಿಳಾಸಃ | |
| 4. ಹಾಲಿ ವಿಳಾಸಃ | |
| 5. ಜನ್ಮ ದಿನಾಂಕ ಮತ್ತು ವಯಸ್ಸುಃ | |
| 6. ಮೊಬೈಲ್ ಸಂಖ್ಯೆಃ | |
| 7. ಆಧಾರ್ ಕಾರ್ಡ್ ಸಂಖ್ಯೆಃ<br>(ಜೆರಾಕ್ಸ್ ಪ್ರತಿಯನ್ನು ಲಗತ್ತಿರುವುದು) | |
| 8. ವಿದ್ಯಾರ್ಹತೆಃ<br>(ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳು / ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸುವುದು) | |
| 9. ಕಂಪ್ಯೂಟರ್ ಜ್ಞಾನಃ<br>(ಇದ್ದರೆ ಪ್ರಮಾಣ ಪತ್ರ ಲಗತ್ತಿಸುವುದು) | ಇದೆ / ಇಲ್ಲ |
| 10. ಹುದ್ದೆಯ ಅನುಭವಃ<br>(ಪ್ರಮಾಣಪತ್ರವಿದ್ದಲ್ಲಿ ಲಗತ್ತಿಸುವುದು) | |
| 11. ಕ್ರಿಮಿನಲ್ ಮೊಕದ್ದಮೆಗಳುಃ<br>(ಕ್ರಿಮಿನಲ್ ಮೊಕದ್ದಮೆಗಳು ಇದ್ದಲ್ಲಿ ಪ್ರಕರಣ ಸಂಖ್ಯೆ ನಮೂದಿಸುವುದು) | ಇದೆ / ಇಲ್ಲ |

ನಾನು ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ಮೇಲ್ಕಂಡ ಮಾಹಿತಿಗಳೆಲ್ಲವೂ ನನ್ನ ತಿಳುವಳಿಕೆಯ ಪ್ರಕಾರ ಸಂಪೂರ್ಣವಾಗಿ ಸತ್ಯವಾಗಿದ್ದು ತಪ್ಪಿದಲ್ಲಿ ಕಾನೂನು ಕ್ರಮಕ್ಕೆ ಒಳಗಾಗಲು ಬದ್ಧನಿರುತ್ತೇನೆ.

ಸ್ಥಳಃ

ದಿನಾಂಕಃ

ಅರ್ಜಿದಾರರ ಹೆಸರು ಮತ್ತು ರುಜು